## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವೃತ್ತಿ ಶಿಕ್ಷಣ ಇಲಾಖೆಯಿಂದ ಹಾಗೂ ಕ್ರಿಶ್ಚಿಯನ್ ಮೆಡಿಕಲ್ ಅಸೋಸಿಯೇಷನ್ ಆಫ್ ಇಂಡಿಯಾ ಇವರಿಂದ ಸಂಯೋಜನೆ ಪಡೆದ ಪ್ಯಾರಾ ಮೆಡಿಕಲ್ ಕೋರ್ಸುಗಳಿಗೆ ಪ್ಯಾರಾ ಮೆಡಿಕಲ್ ಬೋರ್ಡಿನ ಸಂಯೋಜನೆ ನೀಡುವ ಬಗ್ಗೆ.

ooooo

ಓದಲಾಗಿದೆ:—

ಪೀಠಾಧಿಪತಿಗಳು, ಪ್ಯಾರಾ ಮೆಡಿಕಲ್ ಬೋರ್ಡ್ ಹಾಗೂ ನಿರ್ದೇಶಕರು, ವೈದ್ಯಕೀಯ ಶಿಕ್ಷಣ, ಬೆಂಗಳೂರು ಇವರ ಪತ್ರ ಸಂಖ್ಯೆ: ಪಿಎಂಬಿ :49:98—99, ದಿನಾಂಕ : 07—0[illegible]—1998.

ಪ್ರಸ್ತಾವನೆ:—

ಬ್ಯಾಪ್ಟಿಸ್ಟ್ ಆಸ್ಪತ್ರೆ, ಬೆಂಗಳೂರು ಇವರಿಗೆ ಕ್ರಿಶ್ಚಿಯನ್ ಮೆಡಿಕಲ್ ಅಸೋಸಿಯೇಷನ್ ಆಫ್ ಇಂಡಿಯಾರವರು ಕ್ಷ—ಕಿರಣ ತಂತ್ರಜ್ಞ, ಕಿರಿಯ ಪ್ರಯೋಗ ಶಾಲಾ ತಂತ್ರಜ್ಞ, ಮೆಡಿಕಲ್ ರೆಕಾರ್ಡ್ ತಂತ್ರಜ್ಞ ಕೋರ್ಸುಗಳನ್ನು ಹಾಗೂ ಮದೀನ ಪದವಿ ಪೂರ್ವ ಕಾಲೇಜ್, ಧಾರವಾಡ ಇವರಿಗೆ ವೃತ್ತಿ ಶಿಕ್ಷಣ ಇಲಾಖೆಯು ಕಿರಿಯ ಪ್ರಯೋಗ ಶಾಲಾ ತಂತ್ರಜ್ಞರ ಕೋರ್ಸುಗಳನ್ನು ನಡೆಸಲು ಅನುಮತಿ ನೀಡಿದ್ದವು. ಆದರೆ ಈಗ ಪ್ಯಾರಾ ಮೆಡಿಕಲ್ ಬೋರ್ಡ್ ಅಸ್ತಿತ್ವಕ್ಕೆ ಬಂದಿರುವುದರಿಂದ ಬೋರ್ಡಿನ [illegible] ನಿಯಮಾವಳಿಯಂತೆ, ಸದರಿ ಸಂಸ್ಥೆಗಳು ಪ್ಯಾರಾ ಮೆಡಿಕಲ್ ಬೋರ್ಡಿನ ಸಂಯೋಜನೆಗಾಗಿ ಅರ್ಜಿಯನ್ನು ಸಲ್ಲಿಸಿದ್ದವು. ಈ ಬಗ್ಗೆ ಪ್ಯಾರಾ ಮೆಡಿಕಲ್ ಬೋರ್ಡಿನಿಂದ ನಿಯೋಜಿತರಾದ ತಪಾಸಣಾ ತಂಡದವರು ಸಂಸ್ಥೆಗಳನ್ನು ತಪಾಸಣೆ ನಡೆಸಿ, ಸಲ್ಲಿಸಿದ ತಪಾಸಣಾ ವರದಿಯನ್ನು ದಿನಾಂಕ 2—6—98ರಂದು ನಡೆದ ಪ್ಯಾರಾ ಮೆಡಿಕಲ್ ಬೋರ್ಡಿನ ಸಭೆಯಲ್ಲಿ ಅನುಮೋದಿಸಲಾಗಿದೆ. ಈ ಹಿನ್ನೆಲೆಯಲ್ಲಿ ಬ್ಯಾಪ್ಟಿಸ್ಟ್ ಆಸ್ಪತ್ರೆ, ಬೆಂಗಳೂರು ಇವರಿಗೆ ಕ್ಷ—ಕಿರಣ ತಂತ್ರಜ್ಞ 10 ವಿದ್ಯಾರ್ಥಿಗಳು, ಕಿರಿಯ ಪ್ರಯೋಗ ಶಾಲಾ ತಂತ್ರಜ್ಞ 15 ವಿದ್ಯಾರ್ಥಿಗಳು ಹಾಗೂ ಮೆಡಿಕಲ್ ರೆಕಾರ್ಡ್ ತಂತ್ರಜ್ಞ 10 ವಿದ್ಯಾರ್ಥಿಗಳು ಮತ್ತು ಮದೀನ ಪದವಿ ಪೂರ್ವ ಕಾಲೇಜು, ಧಾರವಾಡ, ಇವರಿಗೆ ಕಿರಿಯ ಪ್ರಯೋಗ ಶಾಲಾ ತಂತ್ರಜ್ಞ ಕೋರ್ಸುಗಳ 20 ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ 1998—99ನೇ ಸಾಲಿನಿಂದ ಪ್ಯಾರಾ ಮೆಡಿಕಲ್ ಬೋರ್ಡಿನಡಿ ಮುಂದುವರಿಸಿಕೊಂಡು ಹೋಗಲು ಸರ್ಕಾರದ ಮಂಜೂರಾತಿ ನೀಡುವಂತೆ ವೈದ್ಯಕೀಯ ಶಿಕ್ಷಣ ನಿರ್ದೇಶಕರು ಹಾಗೂ ಪೀಠಾಧಿಪತಿಗಳು, ಪ್ಯಾರಾ ಮೆಡಿಕಲ್ ಬೋರ್ಡ್ ಇವರು ಕೋರಿರುತ್ತಾರೆ. ಆದುದರಿಂದ ಈ ಆದೇಶ

ಸರ್ಕಾರಿ ಆದೇಶ ಸಂಖ್ಯೆ : ಆಕುಕ 145 ಎಂಎಂಇ 98, ಬೆಂಗಳೂರು, ದಿನಾಂಕ : 12—05—1999.

ಪ್ರಸ್ತಾವನೆಯಲ್ಲಿನ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಬ್ಯಾಪ್ಟಿಸ್ಟ್ ಆಸ್ಪತ್ರೆ, ಬೆಂಗಳೂರು ಹಾಗೂ ಮದೀನ ಪದವಿ ಪೂರ್ವ ಕಾಲೇಜು, ಧಾರವಾಡ ಇವರುಗಳು ಹಾಲಿ ಈಗ ನಡೆಸುತ್ತಿರುವ ಈ ಕೆಳಕಂಡ ಕೋರ್ಸುಗಳನ್ನು ಅವುಗಳ ಮುಂದೆ ನಮೂದಿಸಿರುವ ಪ್ರವೇಶಮಿತಿಯೊಂದಿಗೆ ಪ್ಯಾರಾ ಮೆಡಿಕಲ್ ಬೋರ್ಡಿನ ಸಂಯೋಜನೆ ಪಡೆದು 1998—99ನೇ ಸಾಲಿನಿಂದ

————2

ಅನುಬಂಧದಲ್ಲಿ ಲಗತ್ತಿಸಿರುವ ಷರತ್ತುಗಳಿಗನುಸಾರ ಮುಂದುವರಿಸಿಕೊಂಡು ಹೋಗಲು ಅನುಮತಿ ನೀಡಿದೆ.

(1) ಬ್ಯಾಪ್ಟಿಸ್ಟ್ ಆಸ್ಪತ್ರೆ, ಬೆಂಗಳೂರು : ಅ) ಕ್ಷ-ಕಿರಣ ತಂತ್ರಜ್ಞ : 10(ಹತ್ತು) ವಿದ್ಯಾರ್ಥಿಗಳು
ಆ) ವೈದ್ಯಕೀಯ ಪ್ರಯೋಗಶಾಲಾ ತಂತ್ರಜ್ಞ : 15(ಹದಿನೈದು) ವಿದ್ಯಾರ್ಥಿಗಳು
ಇ) ಮೆಡಿಕಲ್ ರೆಕಾರ್ಡ್ ತಂತ್ರಜ್ಞ : 10(ಹತ್ತು) ವಿದ್ಯಾರ್ಥಿಗಳು

(2) ಮಹೀನ ಪದವಿಪೂರ್ವ ಕಾಲೇಜು ಧಾರವಾಡ : ವೈದ್ಯಕೀಯ ಪ್ರಯೋಗಶಾಲಾ ತಂತ್ರಜ್ಞ : 20(ಇಪ್ಪತ್ತು) ವಿದ್ಯಾರ್ಥಿಗಳು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

(ಎಸ್.ಬಿ.ಸಾಲೀಕರ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

ಗೆ:

1) ನಿರ್ದೇಶಕರು, ವೈದ್ಯಕೀಯ ಶಿಕ್ಷಣ, ಬೆಂಗಳೂರು,
2) ಸದಸ್ಯ ಕಾರ್ಯದರ್ಶಿಗಳು, ಪ್ಯಾರಾಮೆಡಿಕಲ್ ಬೋರ್ಡ್, ಆನಂದರಾವ ವೃತ್ತ, ಬೆಂಗಳೂರು,
3) ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು,
4) ಕಾರ್ಯದರ್ಶಿಗಳು; ಮಹೀನ ಪದವಿ ಪೂರ್ವ ಕಾಲೇಜು, ಧಾರವಾಡ.
5) ಆಡಳಿತಾಧಿಕಾರಿಗಳು, ಬೆಂಗಳೂರು ಬ್ಯಾಪ್ಟಿಸ್ಟ್ ಆಸ್ಪತ್ರೆ, ಹೆಬ್ಬಾಳ, ಬೆಂಗಳೂರು,
6) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು,
7) ಸರ್ಕಾರದ ಕಾರ್ಯದರ್ಶಿ:ಉಪಕಾರ್ಯದರ್ಶಿ(ವೈಶಿ)ರವರ ಆಪ್ತ ಸಹಾಯಕರುಗಳಿಗೆ,
8) ಶಾಖಾ ರಕ್ಷಾ ಕಡತ : ಹೆಚ್ಚಿನ ಪ್ರತಿಗಳು.

Anaesthesia

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರಿನ ಬ್ಯಾಪ್ಟಿಸ್ಟ್ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾ ಮೆಡಿಕಲ್ ಸೈನ್ಸಸ್‌ಗೆ ಸ್ಥಾಪನೆಗೆ ಮಂಜೂರಾತಿ.

--------

ಓದಲಾಗಿದೆ:

೧) ತಾರೀಖು ೨೭.೦೭.೨೦೦೪ ಸಂಖ್ಯೆ: ಪಿಎಂಬಿ ೪೨೬/೨೦೦೩-೦೪ರ ಪ್ಯಾರಾ ಮೆಡಿಕಲ್ ಬೋರ್ಡ್ ಸದಸ್ಯ ಕಾರ್ಯದರ್ಶಿಯವರ ಪತ್ರ.

ಪ್ರಸ್ತಾವನೆ:

೧) ಬೆಂಗಳೂರಿನ ಬ್ಯಾಪ್ಟಿಸ್ಟ್ ಹಾಸ್ಪಿಟಲ್ ಡಿಪ್ಲೊಮೋ ಇನ್ ಆಪರೇಷನ್ ಥಿಯೇಟರ್ ಟೆಕ್ನಾಲಜಿ ಕೋರ್ಸ್‌ನೊಂದಿಗೆ ಬ್ಯಾಪ್ಟಿಸ್ಟ್ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾಮೆಡಿಕಲ್ ಸೈನ್ಸ್ ಸ್ಥಾಪನೆಗಾಗಿ ಮಂಜೂರಾತಿಗಾಗಿ ವಿದ್ಯುಕ್ತವಾದ ಒಂದು ಅರ್ಜಿಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಸಲ್ಲಿಸಲಾಗಿತ್ತು. ಮಂಡಳಿಯು ವಿಷಯ ತಜ್ಞರ ತಂಡವನ್ನು ರಚಿಸಿ ಮೇಲ್ಕಂಡ ಕೋರ್ಸ್‌ನ್ನು ಸಂಸ್ಥೆಯು ನಡೆಸಲು ಹೊಂದಿರುವ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿ ಅದರ ವರದಿಯನ್ನು ಸಲ್ಲಿಸಲು ಸೂಚಿಸಿತ್ತು. ತಜ್ಞರ ತಂಡವು ಸಂಸ್ಥೆಯನ್ನು ತಾ: ೧೬.೦೬.೨೦೦೪ ರಂದು ಭೇಟಿ ನೀಡಿ ಪರಿಶೀಲಿಸಿ ಅದರ ವರದಿಯನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಮಂಡಳಿಗೆ ಸಲ್ಲಿಸಿತ್ತು. ತಜ್ಞರ ತಂಡದ ಪರಿಶೀಲನಾ ವರದಿಯನ್ನು ತಾರೀಖು ೨೭.೦೭.೨೦೦೪ ರಂದು ನಡೆದ ಅರೆ ವೈದ್ಯಕೀಯ ಮಂಡಳಿಯ ಸಭೆಯಲ್ಲಿ ವಿಶ್ಲೇಷಿಸಿ ಮೇಲ್ಕಂಡ ಸಂಸ್ಥೆಗೆ ೨೦ ಸೀಟುಗಳ ವಿದ್ಯಾರ್ಥಿ ಪ್ರವೇಶಮಿತಿಯ ಡಿಪ್ಲೋಮ ಇನ್ ಆಪರೇಷನ್ ಥಿಯೇಟರ್ ಟೆಕ್ನಾಲಜಿ ಕೋರ್ಸ್‌ನೊಂದಿಗೆ ಮಂಜೂರು ಮಾಡಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ. ಈ ಪ್ರಸ್ತಾವನೆಯನ್ನು [illegible] ಮೇಲೆ ಪರಿಶೀಲಿಸಲಾಗಿದೆ.

## ಸರ್ಕಾರಿ ಆದೇಶ ಸಂಖ್ಯೆ: ಆಕುಕ 525 ಎಂಪಿಎ 2004 ಬೆಂಗಳೂರು, ದಿನಾಂಕ 13.09.2004

೨) ಬೆಂಗಳೂರಿನ ಬ್ಯಾಪ್ಟಿಸ್ಟ್ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾ ಮೆಡಿಕಲ್ ಸೈನ್ಸ್‌ಸ್‌ನ್ನು ಇಪ್ಪತ್ತು ಪ್ರವೇಶಮಿತಿಯ ಡಿಪ್ಲೋಮ ಇನ್ ಆಪರೇಷನ್ ಥಿಯೇಟರ್ ಟೆಕ್ನಾಲಜಿ ಕೋರ್ಸ್‌ನೊಂದಿಗೆ ೨೦೦೪-೨೦೦೫ನೇ ಶೈಕ್ಷಣಿಕ ವರ್ಷದಿಂದ ಜಾರಿಗೆ ಬರುವಂತೆ ಸ್ಥಾಪಿಸಲು ಮಂಜೂರಾತಿ ನೀಡಲಾಗಿದೆ. ಸದರಿ ಮಂಜೂರಾತಿಯು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

### ಷರತ್ತುಗಳು:

(1) ಈ ಕೋರ್ಸುಗಳನ್ನು ಪ್ರಾರಂಭಿಸುವ ಮೊದಲು ಪೂರ್ಣ ಪ್ರಮಾಣದಲ್ಲಿ ಬೋಧಕ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳತಕ್ಕದ್ದು.

(2) ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಪ್ರಾರಂಭ ಮಾಡುವ ಮೊದಲು ಸಂಸ್ಥೆಯು ಸಂಯೋಜನಾ ಶುಲ್ಕದ ರೂಪದಲ್ಲಿ ಪ್ರತಿ ಕೋರ್ಸ್‌ಗೆ ಇಪ್ಪತ್ತು ಸಾವಿರ ರೂಪಾಯಿಗಳನ್ನು ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಂದಾಯ ಮಾಡತಕ್ಕದ್ದು.

(3) ಕಾಲೇಜನ್ನು ಪ್ರಾರಂಭ ಮಾಡುವ ಮೊದಲು ಬೋರ್ಡು ನಿಗದಿಪಡಿಸಿದ ಬ್ಯಾಂಕ್ ಗ್ಯಾರಂಟಿಯನ್ನು ಒದಗಿಸತಕ್ಕದ್ದು.

(4) ಸದರಿ ಕೋರ್ಸ್‌ಗಳಿಗೆ ವಿದ್ಯಾರ್ಥಿ ಪ್ರವೇಶವನ್ನು ವರ್ಷಕ್ಕೆ ಒಂದು ಬಾರಿ ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ಘಟನಾವಳಿ ಪ್ರಕಾರ ಮಾಡಿಕೊಳ್ಳಬೇಕು.

(5) ಸದರಿ ಕೋರ್ಸುಗಳಿಗೆ ಪ್ರವೇಶವನ್ನು ಆಯ್ಕೆಗೊಂಡ ವಿದ್ಯಾರ್ಥಿಗಳ ಪಟ್ಟಿಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಅನುಮೋದನೆಗೆ ಸಲ್ಲಿಸತಕ್ಕದ್ದು.

(6) ಪ್ಯಾರಾ ಮೆಡಿಕಲ್ ಕೋರ್ಸ್‌ಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಗೆ ನಿಗದಿತ ನೋಂದಣಿ ಶುಲ್ಕದೊಂದಿಗೆ ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಅವರ ವಿದ್ಯಾರ್ಹತೆಯ ಪ್ರಮಾಣ ಪತ್ರದೊಂದಿಗೆ ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಸಲ್ಲಿಸತಕ್ಕದ್ದು.

(7) ಪ್ಯಾರಾ ಮೆಡಿಕಲ್ ಕೋರ್ಸ್‌ಗೆ ಪ್ರವೇಶ ಪಡೆಯಲು ಕನಿಷ್ಠ ಪಿಯುಸಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು.

(8) ಪ್ಯಾರಾ ಮೆಡಿಕಲ್ ಕೋರ್ಸ್‌ಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಯಿಂದ ಸರ್ಕಾರ ಅಥವಾ ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ಶುಲ್ಕವನ್ನು ಮಾತ್ರ ಪಡೆಯತಕ್ಕದ್ದು.

(9) ಯಾವುದೇ ಸಂದರ್ಭದಲ್ಲಿ ಸರ್ಕಾರ ಮಂಜೂರಾತಿ ನೀಡಿದ ಪ್ರವೇಶಮಿತಿಗಿಂತ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶ ನೀಡತಕ್ಕದ್ದಲ್ಲ.

(10) ಸರ್ಕಾರ ಕಾಲಕಾಲಕ್ಕೆ ನಿಗದಿಪಡಿಸುವಂತೆ ಸರ್ಕಾರದಿಂದ ಆಯ್ಕೆ ಮಾಡಿದ ಅಭ್ಯರ್ಥಿಗಳಿಗೆ ಪ್ರವೇಶ ನೀಡತಕ್ಕದ್ದಲ್ಲ.

(11) ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ನಿಯಮಾವಳಿಯಂತೆ, ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯುವ ಪ್ರತಿ ವಿದ್ಯಾರ್ಥಿಯು ವಯೋಮಿತಿ ಪಠ್ಯಕ್ರಮ, ಕೋರ್ಸಿನ ಅವಧಿ ಅಥವಾ ಪಠ್ಯಕ್ರಮ ಮತ್ತು ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ಇತರೆ ನಿಯಮಗಳನ್ನು ಸಂಸ್ಥೆಯು ಚಾಚೂ ತಪ್ಪದೇ ಕಡ್ಡಾಯವಾಗಿ ಪಾಲಿಸತಕ್ಕದ್ದು.

(12) ಕೋರ್ಸನ್ನು ಪ್ರಾರಂಭಿಸುವ ಮುನ್ನ ಸುಸಜ್ಜಿತ ತರಗತಿ ಕೊಠಡಿ ಪ್ರಯೋಗಶಾಲೆ, ವಾಚನಾಲಯ, ವಿದ್ಯಾರ್ಥಿನಿಲಯ ಹಾಗೂ ಇತರೆ ಸೌಲಭ್ಯವನ್ನು ವಿದ್ಯಾರ್ಥಿಗಳಿಗೆ ಒದಗಿಸತಕ್ಕದ್ದು.

(13) ಮೂಲಭೂತ ಸೌಕರ್ಯಗಳ ಲಭ್ಯತೆಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳು ಮೊದಲ ವರ್ಷದ ಪರೀಕ್ಷೆಯನ್ನು ತೆಗೆದುಕೊಳ್ಳುವ ಪೂರ್ವದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ವಿವೇಚನಾನುಸಾರ ಎರಡನೇ ಬಾರಿಗೆ ಸಂಸ್ಥೆಯನ್ನು ತಪಾಸಣೆಗೆ ಒಳಪಡಿಸಲಾಗುವುದು

(14) ಮೇಲ್ಕಂಡ ಪ್ಯಾರಾ ಮೆಡಿಕಲ್ ಕೋರ್ಸ್‌ಗಳಿಗೆ ಸರ್ಕಾರದಿಂದ ಯಾವುದೇ ಆರ್ಥಿಕ ನೆರವು ಅಥವಾ ಅನುದಾನವನ್ನು ನೀಡಲಾಗುವುದಿಲ್ಲ ಅದು ಶಾಶ್ವತ ಅನುದಾನ ರಹಿತವಾಗಿರುತ್ತದೆ.

(15) ಪ್ಯಾರಾ ಮೆಡಿಕಲ್ ಬೋರ್ಡ್‌ನಲ್ಲಿ ನೋಂದಣಿ ಮಾಡಿಸತಕ್ಕದ್ದು ಹಾಗೂ ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ಮಾದರಿಯನ್ನು ಅನುಸರಿಸತಕ್ಕದ್ದು.

(16) ಪ್ಯಾರಾ ಮೆಡಿಕಲ್ ಕೋರ್ಸ್‌ಗಳ ಅಂತ್ಯದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ನಡೆಸುವ ಪರೀಕ್ಷೆಯನ್ನು ವಿದ್ಯಾರ್ಥಿಗಳು ತೆಗೆದುಕೊಂಡು ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರವನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ನಿಂದ ಪಡೆಯತಕ್ಕದ್ದು.

(17) ಪ್ರತಿ ತಪಾಸಣೆಗೆ ನಿಗದಿಪಡಿಸಿದ ಶುಲ್ಕವನ್ನು ಕಾಲೇಜು ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಸಂದಾಯ ಮಾಡತಕ್ಕದ್ದು.

(18) ತಾರೀಖು ೩೦.೩.೧೯೯೯ ಸಂ: ಆರೂಕ ೧೬೪ ಎಂಎಂಇ ೯೮ರ ಸರ್ಕಾರಿ ಆದೇಶದಲ್ಲಿ ನಿಗದಿಪಡಿಸಿರುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

(19) ಕಾಲಕಾಲಕ್ಕೆ ಸರ್ಕಾರ ಮತ್ತು ವೈದ್ಯಕೀಯ ಶಿಕ್ಷಣ ನಿರ್ದೇಶಕರು ಹಾಗೂ ಪ್ಯಾರಾ ಮೆಡಿಕಲ್ ಬೋರ್ಡ್ ಹೊರಡಿಸುವ ಆದೇಶಗಳಿಗೆ ಸಂಸ್ಥೆಯು ಬದ್ಧವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್. ನಾಗರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

ಇವರಿಗೆ,

೧) ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಬೆಂಗಳೂರು-೫೬೦ ೦೦೯
೨) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತರು ; ನಿರ್ದೇಶಕರು, ಬೆಂಗಳೂರು-೫೬೦ ೦೦೯
೩) ಅಧ್ಯಕ್ಷರು ; ಸದಸ್ಯ ಕಾರ್ಯದರ್ಶಿ , ಪ್ಯಾರಾ ಮೆಡಿಕಲ್ ಬೋರ್ಡ್, ಬೆಂಗಳೂರು-೫೬೦ ೦೦೨
೪) ನಿರ್ದೇಶಕರು(ಸೇವೆ), ಬೆಂಗಳೂರು ಬ್ಯಾಪ್ಟಿಸ್ಟ್ ಹಾಸ್ಪಿಟಲ್, ಹೆಬ್ಬಾಳ ಬೆಂಗಳೂರು-೫೬೦ ೦೨೪
೫) ಪ್ರಾಂಶುಪಾಲರು , ಬಾಪ್ಟಿಸ್ಟ್ ಇನ್ಸಿಟ್ಯೂಟ್ ಆಫ್ ಪ್ಯಾರಾಮೆಡಿಕಲ್ಸ್ ಸೈನ್ಸ್, ಹೆಬ್ಬಾಳ ಬೆಂಗಳೂರು-೫೬೦ ೦೨೪

Opthal

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಬೆಂಗಳೂರು ಬ್ಯಾಪ್ಟಿಸ್ಟ್ ಆಸ್ಪತ್ರೆ, ಬಳ್ಳಾರಿ ರಸ್ತೆ, ಹೆಬ್ಬಾಳ, ಬೆಂಗಳೂರು ಈ ಸಂಸ್ಥೆಗೆ ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡುವ ಬಗ್ಗೆ.

******

ಓದಲಾಗಿದೆ:

ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಬೆಂಗಳೂರು ಇವರ ಪತ್ರ ಸಂಖ್ಯೆ:ಪಿಎಂಬಿ/50/2013-14, ದಿನಾಂಕ 18.10.2014.

ಪ್ರಸ್ತಾವನೆ:

ಮೇಲೆ ಓದಲಾದ ಪತ್ರಗಳಲ್ಲಿ ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಬೆಂಗಳೂರು ಇವರು ಬೆಂಗಳೂರು ಬ್ಯಾಪ್ಟಿಸ್ಟ್ ಆಸ್ಪತ್ರೆ, ಬಳ್ಳಾರಿ ರಸ್ತೆ, ಹೆಬ್ಬಾಳ, ಬೆಂಗಳೂರು ಈ ಸಂಸ್ಥೆಯು 2015-16 ನೇ ಸಾಲಿನಿಂದ ಡಿಪ್ಲೊಮಾ ಇನ್ ಆಪ್ತಾಲ್ಮಿಕ್ ಟೆಕ್ನಿಕ್ ಕೋರ್ಸನ್ನು 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿಗಾಗಿ ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಅರ್ಜಿಯನ್ನು ಸಲ್ಲಿಸಿದ್ದು, ಪ್ಯಾರಾ ಮೆಡಿಕಲ್ ಬೋರ್ಡ್ ಈ ಸಂಸ್ಥೆಯಲ್ಲಿ ಸದರಿ ಕೋರ್ಸುಗಳನ್ನು ಹೊಸದಾಗಿ ಪ್ರಾರಂಭಿಸಲು ಅಗತ್ಯವಿರುವ ಮೂಲಭೂತ ಸೌಕರ್ಯಗಳ ಬಗ್ಗೆ ಸ್ಥಳ ತಪಾಸಣೆ ನಡೆಸಿ, ವರದಿ ಸಲ್ಲಿಸಲು ತಪಾಸಣಾ ತಂಡವನ್ನು ರಚಿಸಲಾಗಿತ್ತೆಂದು, ಅದರಂತೆ, ತಪಾಸಣಾ ತಂಡವು ಸಂಸ್ಥೆಗೆ ಭೇಟಿ ನೀಡಿ, ಸ್ಥಳ ತಪಾಸಣೆ ನಡೆಸಿ, ಈ ಸಂಸ್ಥೆಯಲ್ಲಿ ಸದರಿ ಕೋರ್ಸುಗಳನ್ನು ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲು ಶಿಫಾರಸ್ಸು ಮಾಡಿರುತ್ತದೆಂದು ತಿಳಿಸುತ್ತಾ, ಈ ಸಂಸ್ಥೆಗೆ 2015-16 ನೇ ಸಾಲಿನಿಂದ ಡಿಪ್ಲೊಮಾ ಇನ್ ಆಪ್ತಾಲ್ಮಿಕ್ ಟೆಕ್ನಿಕ್ ಕೋರ್ಸನ್ನು 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ. ಮುಂದುವರೆದು, ತಪಾಸಣಾ ತಂಡವು ಸಲ್ಲಿಸಿರುವ ವರದಿಯನ್ನು ಹಾಗೂ ಈ ಬಗ್ಗೆ ಪ್ಯಾರಾ ಮೆಡಿಕಲ್ ಬೋರ್ಡ್‌ನಲ್ಲಿ ಜರುಗಿದ ಸಭೆಯ ನಡವಳಿಯ ಪ್ರತಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ ಬೆಂಗಳೂರು ಬ್ಯಾಪ್ಟಿಸ್ಟ್ ಆಸ್ಪತ್ರೆ, ಬಳ್ಳಾರಿ ರಸ್ತೆ, ಹೆಬ್ಬಾಳ, ಬೆಂಗಳೂರು ಈ ಸಂಸ್ಥೆಗೆ 2015-16 ನೇ ಸಾಲಿನಿಂದ ಡಿಪ್ಲೊಮಾ ಇನ್ ಆಪ್ತಾಲ್ಮಿಕ್ ಟೆಕ್ನಿಕ್ ಕೋರ್ಸನ್ನು 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 06 ಎಂಎಂಸಿ 2015, ಬೆಂಗಳೂರು, ದಿನಾಂಕ 10-03-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ಬ್ಯಾಪ್ಟಿಸ್ಟ್ ಆಸ್ಪತ್ರೆ, ಬಳ್ಳಾರಿ ರಸ್ತೆ, ಹೆಬ್ಬಾಳ, ಬೆಂಗಳೂರು ಈ ಸಂಸ್ಥೆಗೆ 2015-16 ನೇ ಸಾಲಿನಿಂದ ಡಿಪ್ಲೊಮಾ ಇನ್ ಆಪ್ತಾಲ್ಮಿಕ್ ಟೆಕ್ನಿಕ್ ಕೋರ್ಸನ್ನು 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಿ ಆದೇಶಿಸಿದೆ.

**ಷರತ್ತುಗಳು**

(1) ಯಾವುದೇ ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಪ್ರಾರಂಭ ಮಾಡುವ ಮೊದಲು ಸಂಸ್ಥೆಯು ಸಂಯೋಜನಾ ಶುಲ್ಕದ ರೂಪದಲ್ಲಿ ಪ್ರತಿ ಕೋರ್ಸಿಗೆ ರೂ.30,000/- (ಮೂವತ್ತು ಸಾವಿರ ರೂಪಾಯಿಗಳು ಮಾತ್ರ) ಗಳು ಹಾಗೂ ಪ್ರತಿ ವರ್ಷ ಸಂಯೋಜನಾ ನವೀಕರಣ ಶುಲ್ಕವಾಗಿ ರೂ.10,000/- (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಅಥವಾ ಈ ಬಗ್ಗೆ ಸರ್ಕಾರವು ಕಾಲಕಾಲಕ್ಕೆ ಪರಿಷ್ಕರಿಸಿ ನಿಗದಿಪಡಿಸುವ ದರಗಳಂತೆ ಶುಲ್ಕವನ್ನು ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಂದಾಯ ಮಾಡತಕ್ಕದ್ದು.

(2) ಈ ಸಂಸ್ಥೆಯವರು ಸದರಿ ಕೋರ್ಸುಗಳನ್ನು ಪ್ರಾರಂಭಿಸುವ ಮೊದಲು ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸುವ ಬ್ಯಾಂಕ್ ಗ್ಯಾರಂಟಿಯನ್ನು ಒದಗಿಸತಕ್ಕದ್ದು.

(3) ಸದರಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ವರ್ಷಕ್ಕೆ ಒಂದು ಬಾರಿ ನವೆಂಬರ್ ತಿಂಗಳೊಳಗಾಗಿ ನೀಡಿ, ಜನವರಿ ಅಥವಾ ಫೆಬ್ರವರಿ ತಿಂಗಳ ಮಧ್ಯಂತರದೊಳಗೆ ಪ್ರವೇಶಪಡೆದ ವಿದ್ಯಾರ್ಥಿಗಳ ಪಟ್ಟಿಯನ್ನು, ಮೂಲ ಅಂಕಪಟ್ಟಿಗಳನ್ನು ಮತ್ತು ದೃಢೀಕರಣಗಳನ್ನು ಈ ಸಂಸ್ಥೆಯವರು ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಲ್ಲಿಸತಕ್ಕದ್ದು.

(4) ಸದರಿ ಕೋರ್ಸುಗಳಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಗೆ **ರೂ.500.00** ರಂತೆ ನೋಂದಣಿ ಶುಲ್ಕ ಹಾಗೂ ಅವರ ವಿದ್ಯಾರ್ಹತೆಯ ಪ್ರಮಾಣ ಪತ್ರದೊಂದಿಗೆ ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಮಂಜೂರಾತಿಗಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಲ್ಲಿಸತಕ್ಕದ್ದು.

(5) ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯಲು ಕನಿಷ್ಟ ವಿದ್ಯಾರ್ಹತೆಯಾದ ಪಿ.ಯು.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರತಕ್ಕದ್ದು.

(6) ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಯಿಂದ ಸರ್ಕಾರವು ನಿಗದಿಪಡಿಸಿರುವ ಶುಲ್ಕವನ್ನು ಮಾತ್ರ ಪಡೆಯತಕ್ಕದ್ದು.

(7) ಸರ್ಕಾರವು ಮಂಜೂರಾತಿ ನೀಡಿದ ಪ್ರವೇಶ ಮಿತಿಗಿಂತ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶ ನೀಡತಕ್ಕದ್ದಲ್ಲ. ಒಂದು ವೇಳೆ ನಿಗದಿಪಡಿಸಿದ ಪ್ರವೇಶಮಿತಿಗಿಂತ ಹೆಚ್ಚಿನ ಪ್ರವೇಶ ಮಾಡಿಕೊಂಡಲ್ಲಿ, ಅದರಿಂದ ಉಂಟಾಗುವ ಅನಾನುಕೂಲ / ಸಮಸ್ಯೆಗಳಿಗೆ ಸಂಸ್ಥೆಯೇ ಜವಾಬ್ದಾರಿಯಾಗಿರುತ್ತದೆ.

(8) ಸದರಿ ಸಂಸ್ಥೆಗೆ ಸರ್ಕಾರದಿಂದ ಮಂಜೂರಾದ ಸೀಟುಗಳಲ್ಲಿ **ಶೇ.20** ರಷ್ಟು ಸೀಟುಗಳನ್ನು ಸರ್ಕಾರದಿಂದ ಆಯ್ಕೆ ಮಾಡಿದ ಅಭ್ಯರ್ಥಿಗಳಿಗೆ ಪ್ರವೇಶ ನೀಡಲು ಸಂಸ್ಥೆಯು ಬದ್ಧವಾಗಿರತಕ್ಕದ್ದು.

(9) ಸದರಿ ಸಂಸ್ಥೆಯು ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ನಿಯಮಾವಳಿಯಂತೆ, ಪ್ಯಾರಾ ಮೆಡಿಕಲ್ ಕೋರ್ಸುಗಳಿಗೆ ಪ್ರವೇಶ ಪಡೆಯುವ ಪ್ರತಿ ವಿದ್ಯಾರ್ಥಿಯ ವಯೋಮಿತಿ, ಪಠ್ಯಕ್ರಮ, ಕೋರ್ಸಿನ ಅವಧಿ ಹಾಗೂ ಪರೀಕ್ಷಾ ಕ್ರಮ ಮತ್ತು ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ಇತರೆ ನಿಯಮಗಳನ್ನು ಚಾಚೂ ತಪ್ಪದೇ ಕಡ್ಡಾಯವಾಗಿ ಪಾಲಿಸತಕ್ಕದ್ದು.

(10) ಸಂಸ್ಥೆಯು ಸುಸಜ್ಜಿತ ತರಗತಿ ಕೊಠಡಿ, ಪ್ರಯೋಗಶಾಲೆ, ವಾಚನಾಲಯ, ವಿದ್ಯಾರ್ಥಿನಿಲಯ ಹಾಗೂ ಇತರೆ ಮೂಲಭೂತ ಸೌಲಭ್ಯವನ್ನು ವಿದ್ಯಾರ್ಥಿಗಳಿಗೆ ಒದಗಿಸತಕ್ಕದ್ದು.

(11) ಪ್ಯಾರಾ ಮೆಡಿಕಲ್ ಬೋರ್ಡ್ ಇಚ್ಛಿಸಿದಲ್ಲಿ, ಸದರಿ ಸಂಸ್ಥೆಯು ಹೊಂದಿರುವ ಮೂಲಭೂತ ಸೌಕರ್ಯಗಳ ಬಗ್ಗೆ ವಿದ್ಯಾರ್ಥಿಗಳು ಮೊದಲ ವರ್ಷದ ಪರೀಕ್ಷೆಯನ್ನು ತೆಗೆದುಕೊಳ್ಳುವ ಪೂರ್ವದಲ್ಲಿ ಸಂಸ್ಥೆಯನ್ನು ಎರಡನೇ ಬಾರಿಗೆ ತಪಾಸಣೆ ಮಾಡತಕ್ಕದ್ದು.

(12) ಸರ್ಕಾರದಿಂದ ಯಾವುದೇ ಆರ್ಥಿಕ ಸೌಲಭ್ಯ ಅಥವಾ ಅನುದಾನವನ್ನು ಈ ಸಂಸ್ಥೆಗೆ ನೀಡಲಾಗುವುದಿಲ್ಲ.

(13) ಸಂಸ್ಥೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ನಲ್ಲಿ ನೋಂದಣಿ ಮಾಡಿಸತಕ್ಕದ್ದು ಹಾಗೂ ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸುವ ಮಾದರಿಯನ್ನು ಅನುಸರಿಸತಕ್ಕದ್ದು.

(14) ಪ್ಯಾರಾ ಮೆಡಿಕಲ್ ಕೋರ್ಸಿನ ಅಂತ್ಯದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ನಡೆಸುವ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರವನ್ನು ಪ್ಯಾರಾ ಮೆಡಿಕಲ್ ಬೋರ್ಡಿನಿಂದ ಪಡೆಯತಕ್ಕದ್ದು.

(15) ಪ್ರತಿ ತಪಾಸಣೆಗೆ ಮತ್ತು ಒಂದು ಕೋರ್ಸಿಗೆ ಸಂಸ್ಥೆಯು **ರೂ.10,000/-** (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಅಥವಾ ಈ ಬಗ್ಗೆ ಸರ್ಕಾರವು ಕಾಲಕಾಲಕ್ಕೆ ಪರಿಷ್ಕರಿಸಿ ನಿಗದಿಪಡಿಸುವ ದರಗಳಂತೆ ತಪಾಸಣಾ ಶುಲ್ಕವಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ಪಾವತಿ ಮಾಡತಕ್ಕದ್ದು.

(16) ಸರ್ಕಾರವು ಕಾಲಕಾಲಕ್ಕೆ ನಿರ್ದಿಷ್ಟಪಡಿಸುವ ಮಾರ್ಗಸೂಚಿಗಳನ್ನು ಹಾಗೂ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

(17) ಪ್ರಸ್ತುತ ವಿಧಿಸುತ್ತಿರುವ ಮೇಲ್ಕಂಡ ಷರತ್ತುಗಳನ್ನು ಉಲ್ಲಂಘಿಸಿದ ಸಂದರ್ಭದಲ್ಲಿ ಅಂತಹ ಪ್ಯಾರಾ ಮೆಡಿಕಲ್ ಶಾಲೆ/ಕೋರ್ಸ್‌ನ ಮಾನ್ಯತೆಯನ್ನು ರದ್ದುಪಡಿಸಬಹುದೆಂದು ಸಂಸ್ಥೆಯು ರೂ.100/- ರ ಛಾಪಾ ಕಾಗದದಲ್ಲಿ ಮುಚ್ಚಳಿಕೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಸಲ್ಲಿಸತಕ್ಕದ್ದು.

(18) ಪ್ರಸ್ತಾವಿತ ಶಾಲೆಯ ಕಟ್ಟಡವು ಬಾಡಿಗೆ / ಲೀಸ್‌ನಲ್ಲಿದ್ದ ಪಕ್ಷದಲ್ಲಿ ಬಾಡಿಗೆ / ಲೀಸ್ ಕರಾರು ಪತ್ರವು ರೂ.100/- ರ ಛಾಪಾ ಕಾಗದದಲ್ಲಿರತಕ್ಕದ್ದು ಮತ್ತು ಬಾಡಿಗೆ / ಲೀಸ್ ಅವಧಿಯು ಕನಿಷ್ಠ 10 ವರ್ಷಗಳಾಗಿರತಕ್ಕದ್ದು.

(19) ಪ್ಯಾರಾ ಮೆಡಿಕಲ್ ಶಾಲೆ / ಕೋರ್ಸ್ ಮಂಜೂರಾತಿ ಆದ ದಿನಾಂಕದಿಂದ 05 ವರ್ಷಗಳೊಳಗಾಗಿ ಮಂಜೂರಾತಿ ಪಡೆದ ಸಂಸ್ಥೆಯು ಪ್ಯಾರಾ ಮೆಡಿಕಲ್ ಶಾಲೆ / ಕೋರ್ಸ್‌ನ್ನು ನಡೆಸಲು ತನ್ನದೇ ಆದ ಸ್ವಂತ ಕಟ್ಟಡವನ್ನು ಹೊಂದುವುದಾಗಿ ರೂ.100/- ರ ಛಾಪಾ ಕಾಗದದಲ್ಲಿ ಮುಚ್ಚಳಿಕೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಸಲ್ಲಿಸತಕ್ಕದ್ದು.

(20) ಸಂಸ್ಥೆಯು ಪ್ರತಿ ವರ್ಷ ವಿದ್ಯಾರ್ಥಿಗಳ ಪ್ರವೇಶವನ್ನು ಪ್ರಾರಂಭಿಸುವ ಮೊದಲು ಸಂಸ್ಥೆಯು ಪ್ರಾಂಶುಪಾಲರನ್ನು ಒಳಗೊಂಡಂತೆ ಎಲ್ಲಾ ಸಿಬ್ಬಂದಿಗಳ (ಬೋಧಕ ಮತ್ತು ಬೋಧಕೇತರ) ಸಂಪೂರ್ಣ ಮಾಹಿತಿಯನ್ನು ಬೋರ್ಡ್‌ಗೆ ಸಲ್ಲಿಸತಕ್ಕದ್ದು.

(21) ರಾಜ್ಯ ಸರ್ಕಾರ ಹಾಗೂ ಪ್ಯಾರಾ ಮೆಡಿಕಲ್ ಬೋರ್ಡ್ ಕಾಲಕಾಲಕ್ಕೆ ಹೊರಡಿಸುವ ಆದೇಶಗಳನ್ನು ಯಥಾವತ್ತಾಗಿ ಪಾಲಿಸತಕ್ಕದ್ದು.

(21) ಮೇಲ್ಕಂಡ ಯಾವುದೇ ಷರತ್ತುಗಳನ್ನು ಸಂಸ್ಥೆಯು ಉಲ್ಲಂಘಿಸಿದ್ದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಕೆ.ನಾಗವೇಣಿ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ವೈದ್ಯಕೀಯ ಶಿಕ್ಷಣ)

ಇವರಿಗೆ:

1. ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಆನಂದರಾವ್ ವೃತ್ತ, ಬೆಂಗಳೂರು-560009.
2. ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಲಕ್ಷ್ಮಿ ಕಾಂಪ್ಲೆಕ್ಸ್, ಮೊದಲನೇ ಮಹಡಿ, ನಂ.5, ಹೊಸ ನಂ.40/20ಎ, ವಾಣಿ ವಿಲಾಸ ಆಸ್ಪತ್ರೆ ಎದುರು, ಫೋರ್ಟ್, ಬೆಂಗಳೂರು -560002.
3. ಅಧ್ಯಕ್ಷರು / ಕಾರ್ಯದರ್ಶಿ / ಪ್ರಾಂಶುಪಾಲರು, ಬೆಂಗಳೂರು ಬ್ಯಾಪ್ಟಿಸ್ಟ್ ಆಸ್ಪತ್ರೆ, ಬಳ್ಳಾರಿ ರಸ್ತೆ, ಹೆಬ್ಬಾಳ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:

1. ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ), ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ), ವಿಕಾಸಸೌಧ, ಬೆಂಗಳೂರು.